## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠ, ನರಸೀಪುರ, ಇದರ ಸಮಗ್ರ ಅಭಿವೃದ್ಧಿಗೆ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸ-7/ಸಿಆರ್-02/2021-22, ದಿನಾಂಕ:23.02.2022

* * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ. 10.00 ಲಕ್ಷ ತಾಲ್ಲೂಕು ಕೇಂದ್ರಸ್ಥಾನ ರೂ. 25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ. 50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2) ರ ಸರ್ಕಾರದ ಆದೇಶದಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ರ ಆಯುಕ್ತರ ಪ್ರಸ್ತಾವನೆಯಲ್ಲಿ *ಶ್ರೀ* ನಿಜಶರಣ ಅಂಬಿಗರ ಚೌಡಯ್ಯ ನವರ ಗುರುಪೀಠ(ರಿ) ಇವರಿಗೆ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಹಾವೇರಿ ಜಿಲ್ಲೆ, ರವರು ತಮ್ಮ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆ ಸಲ್ಲಿಸಿದ್ದು ಸದರಿ ಪ್ರಸ್ತಾವನೆಯಲ್ಲಿ ಪ್ರವರ್ಗ-1 ಬೆಸ್ತರ ಸಮುದಾಯಕ್ಕೆ ಸೇರಿರುವ ಈ ಸಂಸ್ಥೆಯು ಆಸ್ತಿ ನಂಬರ್-515/4ರಲ್ಲಿ ನಿರ್ಮಿಸುತ್ತಿರುವ ಸಮುದಾಯಭವನ ಮತ್ತು ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ರೂ.550.00ಲಕ್ಷಗಳ ಅಂದಾಜು ಪಟ್ಟಿಯನ್ನು ಹಾಗೂ ಸಂಬಂಧಿಸಿದ ದಾಖಲೆಗಳನ್ನು ಆಧರಿಸಿ ಸಂಸ್ಥೆಗೆ ಅನುದಾನ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 298 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 19-03-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, *ಶ್ರೀ* ನಿಜಶರಣ ಅಂಬಿಗರ ಚೌಡಯ್ಯ ನವರ ಗುರುಪೀಠ(ರಿ), ನರಸೀಪುರ, ಇವರಿಗೆ ಸಮುದಾಯ ಭವನ ಮತ್ತು ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ರೂ.5.00 ಕೋಟಿ (ಐದು ಕೋಟಿ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

---2

**ಷರತ್ತುಗಳು:-**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಹಾಲಿ ಉಲ್ಲೇಖದಲ್ಲಿ ಓದಲಾದ (1) ಮತ್ತು (2) ಮಾರ್ಗಸೂಚಿಗಳ ಷರತ್ತಿನಂತೆ ಸದರಿ ಸಂಸ್ಥೆಯು ಅರ್ಹತೆ ಹೊಂದಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು, ಮಾರ್ಗಸೂಚಿಗಳ ಪ್ರಕಾರ ಸಂಸ್ಥೆ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಮುಂದಿನ ಕ್ರಮ ತೆಗೆದುಕೊಳ್ಳುವುದು. ಸಮುದಾಯಭವನದ ಮತ್ತು ವಿಧ್ಯಾರ್ಥಿ ನಿಲಯದ ಕಟ್ಟಡಗಳನ್ನು ನಿರ್ಮಿಸಲು ಸಂಸ್ಥೆಯ ಹೆಸರಿನಲ್ಲಿ ನಿವೇಶನ ಹೊಂದಿದೆಯೇ ಎಂಬುದರ ಬಗ್ಗೆ ಖಚಿತ ಪಡಿಸಿಕೊಳ್ಳತಕ್ಕದ್ದು ಹಾಗೂ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತ ಕಟ್ಟಡ ನಕ್ಷೆ ಮತ್ತು ಕಟ್ಟಡ ಕಟ್ಟುವ ಪರವಾನಗಿಯನ್ನು ನಿಯಮಾನುಸಾರ ಪಡೆದುಕೊಂಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳತಕ್ಕದ್ದು. ಬಾಕಿ ಮೊತ್ತವನ್ನು ಟ್ರಸ್ಟ್ ಭರಿಸುವ ಬಗ್ಗೆ ಮುಚ್ಚಳಿಕೆ ಪತ್ರ ಪಡೆಯತಕ್ಕದ್ದು.ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಯೋಜನೆಯ ಮಾರ್ಗಸೂಚಿಗಳಂತೆ ಅರ್ಹತೆ ಹೊಂದಿದಲ್ಲಿ ಮಾತ್ರ ಸಂಬಂಧಪಟ್ಟ ಎಲ್ಲಾ ಅಗತ್ಯ ದಾಖಲಾತಿಗಳ ಪರಿಶೀಲನೆ ನಂತರ ಅರ್ಹತೆಯನುಸಾರ ಅನುದಾನವನ್ನು ಮಾರ್ಗಸೂಚಿಗಳಂತೆ ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು. ಸದರಿ ಸಂಸ್ಥೆ ಹಿಂದುಳಿದ ವರ್ಗಗಳ ಯಾವ ಪ್ರವರ್ಗದಡಿ ಬರುತ್ತದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ , ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ಪಾರದರ್ಶಕವಾಗಿ ಸದ್ಬಳಕೆ ಆಗುವ ಬಗ್ಗೆ ಹಾಗೂ ಮಾರ್ಗಸೂಚಿಗಳಂತೆ ಬಳಕೆಯಾಗುತ್ತಿರುವ ಬಗ್ಗೆ ಪರಿಶೀಲಿಸಲು ಅವಶ್ಯಕ ಕ್ರಮ ತೆಗೆದುಕೊಳ್ಳುವುದು.
4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಗಳಿಗೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.
6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾಗ-2) ದಿ:05.11.2014 ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸತಕ್ಕದ್ದು,
7. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರದಿಂದ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಈ ವೆಚ್ಚವನ್ನು ಲೆಕ್ಕಶೀರ್ಷಿಕೆ:2225-03-001-0-05 (ರಾಜ್ಯವಲಯ ಯೋಜನೆ) ರಡಿ ಒದಗಿಸಿರುವ ಹೆಚ್ಚುವರಿ ಅನುದಾನದಿಂದ ಭರಿಸತಕ್ಕದ್ದು. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 157 ವೆಚ್ಚ-3/2021 ದಿನಾಂಕ:17.03.2022 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಮಾನ್ಯ ಮುಖ್ಯ ಮಂತ್ರಿಗಳು ಹಾಗು ಮಾನ್ಯ ಇಲಾಖಾ ಸಚಿವರ ಅನುಮೋದನೆಯಂತೆ ಹಾಗು ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

19/3/2022

(ಉಮಾದೇವಿ ಆರ್.)
ಸರ್ಕಾರದ ಉಪ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.